Sp

5

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿನ ಯೋಜನೇತರ ಅಡಿಯಲ್ಲಿ ಒಂದನೇ ತ್ರೈಮಾಸಿಕ ಅನುದಾನ ಬಿಡುಗಡೆ ಮಾಡುವ ಬಗ್ಗೆ.

- - - - -

ಓದಲಾಗಿದೆ :-

ಹಣಕಾಸು ನಿಯಂತ್ರಣಾಧಿಕಾರಿ, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು, ಇವರ ಪತ್ರ ಸಂಖ್ಯೆ : ಹನಿಅ/ ವಿಭಾಗ 3/ಹಿ5-1/2012-13, ದಿನಾಂಕ : 12-04-2013.

ಪ್ರಸ್ತಾವನೆ :-

ರಾಜ್ಯ ಸರ್ಕಾರವು 2013-14ನೇ ಸಾಲಿನ ಆಯವ್ಯಯದಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಯೋಜನೇತರ ಉದ್ದೇಶಗಳಿಗಾಗಿ ಲೆಕ್ಕಶೀರ್ಷಿಕೆ 2415-80-004-1-01-101 ಅಡಿಯಲ್ಲಿ ರೂ. 10,000 ಲಕ್ಷಗಳನ್ನು ಹಂಚಿಕೆ ಮಾಡಲಾಗಿದೆ.

ಮೇಲೆ ಓದಲಾದ ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಹಣಕಾಸು ನಿಯಂತ್ರಣಾಧಿಕಾರಿಗಳ ದಿನಾಂಕ : 12-04-2013ರ ಪತ್ರದೊಂದಿಗೆ 2012-13ನೇ ಸಾಲಿನಲ್ಲಿ ಸರ್ಕಾರವು ಬಿಡುಗಡೆ ಮಾಡಿದ ಯೋಜನೇತರ ಅನುದಾನದ ಬಳಕೆ ಪ್ರಮಾಣ ಪತ್ರವನ್ನು (ತಾತ್ಕಾಲಿಕ) ಲಗತ್ತಿಸುತ್ತಾ ರಾಜ್ಯ ಸರ್ಕಾರವು 2013-14ನೇ ಸಾಲಿಗೆ ಯೋಜನೇತರ ಉದ್ದೇಶಗಳಿಗೆ ಲೆಕ್ಕಶೀರ್ಷಿಕೆ 2415-80-004-1-01 ಸಹಾಯ ಅನುದಾನ 101 ಅಡಿಯಲ್ಲಿ ಹಂಚಿಕೆ ಮಾಡಿರುವ ರೂ. 10,000 ಲಕ್ಷಗಳ ಪೈಕಿ ಏಪ್ರಿಲ್‌ನಿಂದ ಜೂನ್ 2013ರವರೆಗೆ ಬೋಧಕ ಮತ್ತು ಬೋಧಕೇತರ ವೇತನ, ಗುತ್ತಿಗೆ ನೌಕರರ ವೇತನ ಮತ್ತು ಇನ್ನಿತರೆ ಭತ್ಯೆಗಳನ್ನು ಭರಿಸಲು ಒಂದನೇ ತ್ರೈಮಾಸಿಕ ಯೋಜನೇತರ ಅಡಿಯಲ್ಲಿ ರೂ. 2500.00 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರಿ ಆದೇಶ ಸಂಖ್ಯೆ : ಕೃಇ 22 ಕೃವಿಬೆ 2013, ಬೆಂಗಳೂರು, ದಿನಾಂಕ : 17-05-2013

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಯೋಜನೇತರ ವೆಚ್ಚಗಳಿಗೆ 2013-14ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ 2415-80-004-1-01-101 ಅಡಿಯಲ್ಲಿ ಹಂಚಿಕೆ ಮಾಡಲಾದ ರೂ. 10,000 ಲಕ್ಷಗಳ ಪೈಕಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಬೋಧಕ ಮತ್ತು ಬೋಧಕೇತರ ವೇತನ, ಗುತ್ತಿಗೆ ನೌಕರರ ಮತ್ತು ಇನ್ನಿತರೆ ಯೋಜನೇತರ ವೆಚ್ಚಗಳಿಗಾಗಿ ರೂ. 2500.00 ಲಕ್ಷಗಳನ್ನು (ರೂಪಾಯಿ ಎರಡು ಸಾವಿರದ ಐದು ನೂರು ಲಕ್ಷಗಳು ಮಾತ್ರ) ಮೊದಲನೇ ತ್ರೈಮಾಸಿಕ ಅನುದಾನವನ್ನಾಗಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ :-

1. ಪ್ರತಿ ತಿಂಗಳ ಅನುದಾನವನ್ನು ಆಯಾ ತಿಂಗಳ 20ನೇ ತಾರೀಖಿನಂದು ಅಥವಾ 20ನೇ ತಾರೀಖಿನ ನಂತರ ಹಿಂದಿನ ತಿಂಗಳ ಬಳಕೆ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು;
2. ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು;
3. ಸರ್ಕಾರವು ನೀಡಿದ ಸೂಚನೆ, ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ಯೋಜನೆಯ ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು;

4. ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು;
5. ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ;
6. ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು.

2. ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು, ಇವರು ಸಲ್ಲಿಸುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಕೃಷಿ ಇಲಾಖೆ (ಯೋಜನೆ), ಇವರಿಗೆ ನೀಡಲಾಗಿದೆ.

3. ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ದಿನಾಂಕ : 09-05-2013ರ ಟಿಪ್ಪಣಿ ಸಂಖ್ಯೆ : ಕೃಇ 79 ಆಂಆಸ 2013ರಲ್ಲಿ ನೀಡಿರುವ ಅಭಿಪ್ರಾಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜೆ. ಆರ್. ವಿಶ್ವನಾಥಾಚಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಕೃಷಿ ಯೋಜನೆ)

ಇವರಿಗೆ :-
1. ಮಹಾಲೇಖಪಾಲರು, ಕರ್ನಾಟಕ (ಲೆಕ್ಕಪತ್ರ/ತನಿಖೆ), ಬೆಂಗಳೂರು.
2. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು.
3. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗಾ ರಸ್ತೆ, ಬೆಂಗಳೂರು.
4. ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 & 5), ವಿಧಾನ ಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.